# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉಡುಪಿ ಮತ್ತು ಹೊಸಪೇಟೆ ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಹಿಂದುಳಿದ ವರ್ಗಗಳ ಇಲಾಖೆಯಲ್ಲಿ ಆರ್ಥಿಕ ವರ್ಷದ ಮಧ್ಯದಲ್ಲಿ ನಿವೃತ್ತರಾಗುವ ಸಿಬ್ಬಂದಿಯವರುಗಳ ವೇತನ ಪಾವತಿ ಸಂಬಂಧ ಅನುದಾನ ಬಿಡುಗಡೆಗೊಳಿಸುವ ಬಗ್ಗೆ

ಓದಲಾಗಿದೆ:

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಉಡುಪಿ ಮತ್ತು ಹೊಸಪೇಟೆರವರುಗಳ ಪತ್ರಗಳು

ಪ್ರಸ್ತಾವನೆ:

ಉಡುಪಿ ಮತ್ತು ಹೊಸಪೇಟೆ ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಹಿಂದುಳಿದ ವರ್ಗಗಳ ಇಲಾಖೆಯಲ್ಲಿ ವಿಸ್ತರಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರುಗಳು 2020-21ನೇ ಸಾಲಿನ ಮೇ 2020ಕ್ಕೆ ನಿವೃತ್ತರಾಗಲಿರುವುದರಿಂದ ಹಾಗೂ ಒಂದೇ ಹುದ್ದೆ ಮಂಜೂರಾಗಿರುವುದರಿಂದ ವೇತನ ವೆಚ್ಚಕ್ಕಾಗಿ ಲೆಕ್ಕ ಶೀರ್ಷಿಕೆ 2225-00-103-0-74-005ರಡಿ ಒದಗಿಸಿರುವ ಅನುದಾನವನ್ನು ಪೂರ್ಣ ವರ್ಷಕ್ಕೆ ಲೆಕ್ಕಾಚಾರಗೊಳಿಸಿ 1/12 ಆಧಾರದ ಮೇಲೆ ಬಿಡುಗಡೆಗೊಳಿಸುತ್ತಿರುವುದರಿಂದ ಮಾರ್ಚ್ ಮಾಹೆಯಿಂದ ವೇತನ ಸೆಳೆಯಲು ತೊಂದರೆಯಾಗುತ್ತಿರುವುದರಿಂದ ಪ್ರಸ್ತಾವಿತ ಕಾರ್ಯಕ್ರಮದಡಿ ಒದಗಿಸಿರುವ ಪೂರ್ಣ ಅನುದಾನವನ್ನು ಬಿಡುಗಡೆಗೊಳಿಸಿದಲ್ಲಿ ನಿವೃತ್ತರಾಗಲಿರುವ ಸಿಬ್ಬಂದಿಯವರ ವೇತನಾಂಶವನ್ನು ಪಾವತಿಸಲು ಸಾಧ್ಯವಿರುವುದಾಗಿ ತಿಳಿಸಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಉಡುಪಿ ಮತ್ತು ಹೊಸಪೇಟೆ ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯ ಷರತ್ತನ್ನು ಸಡಿಲಗೊಳಿಸಿ ಆಯವ್ಯಯದಲ್ಲಿ ಲಭ್ಯವಿರುವ ಪೂರ್ಣ ಅನುದಾನ ತಲಾ ರೂ.2.53ಲಕ್ಷದಂತೆ ಒಟ್ಟು ರೂ.5.00ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2225-03-197-1-01ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 96 ವೆಚ್ಚ 6/2020 ದಿನಾಂಕ: 20ನೇ ಮೇ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದನ್ವಯ 3ರ ಕಾಲಂ ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 4ರ ಕಾರ್ಯಕ್ರಮ ಹಾಗೂ ಆಬ್ಜೆಕ್ಟ್ ಹೆಡ್ ಗಳಡಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರುಗಳು ಮೇ 2020ರ ಅಂತ್ಯಕ್ಕೆ ನಿವೃತ್ತರಾಗಲಿರುವುದರಿಂದ 2020-21ನೇ ಸಾಲಿನಲ್ಲಿ ಒದಗಿಸಿರುವ ಅನುದಾನವನ್ನು ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯ ಷರತ್ತನ್ನು ಸಡಿಲಿಸಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 5ರ ಲೆಕ್ಕ ಶೀರ್ಷಿಕೆಗಳಡಿ ಒಟ್ಟು ರೂ.5.00ಲಕ್ಷ (ರೂಪಾಯಿ ಐದು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

| ಕ್ರಸಂ. | ಜಿಲ್ಲೆ | ತಾಲ್ಲೂಕು ಪಂಚಾಯತಿ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|---|
| 1 | ಉಡುಪಿ | ಉಡುಪಿ | 2225-00-103-0-74-005 | 2225-03-197-1-01-457 | 2.50 |
| 2 | ಬಳ್ಳಾರಿ | ಹೊಸಪೇಟೆ | 2225-00-103-0-74-005 | 2225-03-197-1-01-418 | 2.50 |
| | | | ಒಟ್ಟು | | 5.00 |

*(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಪಿಎಲ್ಎಸ್‌ಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು. ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು).*

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

uploaded on 22/5/20
① 1414466987
② 1414466979

2ನೇ ಪುಟಕ್ಕೆ ಮುಂದುವರೆದಿದೆ....

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ/ಉಡುಪಿ
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಉಡುಪಿ/ಹೊಸಪೇಟೆ
7. ಜಿಲ್ಲಾ/ಉಪ ಖಜಾನಾಧಿಕಾರಿಗಳು, ಉಡುಪಿ/ಹೊಸಪೇಟೆ
8. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ